## 5. ವಯೋಮಿತಿ :

**ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ/82/ಪಿಪಿಎ/2020–ಪಿಎಸ್_ಬಿ, ದಿನಾಂಕ:01.12.2020 ರಲ್ಲಿ ಪಿಎಸ್‌ಐ(ಸಿವಿಲ್) (ಮಿಕ್ಕುಳಿದ ವೃಂದದ) ಮತ್ತು (ಕಲ್ಯಾಣ–ಕರ್ನಾಟಕ) (ಸ್ಥಳೀಯ) ಹುದ್ದೆಗಳಿಗೆ ನಿಗದಿಪಡಿಸಲಾದ ಗರಿಷ್ಟ ವಯೋಮಿತಿಯನ್ನು ಒಂದು ಬಾರಿಗೆ ಮಾತ್ರ ಅರ್ಹತಾ ದಿನಾಂಕವನ್ನು ದಿನಾಂಕ: 01.04.2020 ಎಂದು ಪರಿಗಣಿಸಲು ಆದೇಶಿಸಿರುತ್ತದೆ. ಆದ್ದರಿಂದ 01.04.2020ಕ್ಕೆ** ಅಭ್ಯರ್ಥಿಗೆ ಕನಿಷ್ಟ 21 ವರ್ಷ ವಯಸ್ಸಾಗಿರಬೇಕು. ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

ಎ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 32 ವರ್ಷಗಳು.
ಬಿ) ಇತರೆ ಅಭ್ಯರ್ಥಿಗಳಿಗೆ 30 ವರ್ಷಗಳು.

**ಸೇವಾನಿರತ ಅಭ್ಯರ್ಥಿಗಳಿಗೆ:**

ಎ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 40 ವರ್ಷಗಳು.
ಬಿ) ಇತರೆ ಅಭ್ಯರ್ಥಿಗಳಿಗೆ 35 ವರ್ಷಗಳು.

*** ಸೇವಾನಿರತ ಅಭ್ಯರ್ಥಿ:**

ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ ಸಹಾಯಕ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಕನಿಷ್ಟ 5 ವರ್ಷಗಳ ಸೇವೆಯನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 01.04.2020ಕ್ಕೆ ಪೂರ್ಣಗೊಳಿಸಿರಬೇಕು ಹಾಗೂ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪೊಲೀಸ್ ಇಲಾಖೆಯಲ್ಲಿನ ಮೇಲ್ಕಂಡ ವೃಂದಗಳಲ್ಲಿ ಸೇವೆ ಸಲ್ಲಿಸುತ್ತಿರಬೇಕು.

**ಮಾಜಿ ಸೈನಿಕ ಅಭ್ಯರ್ಥಿಗಳಿಗೆ:**

ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ" ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

***ಮಾಜಿ ಸೈನಿಕರ ಬಗ್ಗೆ ವಿವರಣೆ:***

ಮಾಜಿ ಸೈನಿಕ ಎಂದರೆ ಸಶಸ್ತ್ರ ಸೇನೆಗಳಾದ ನಿಯಮಿತ ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್(Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್(General Reserved Engineering Force), ಲೋಕ್ ಸಹಾಯಕ್ ಸೇನಾ(Lok Sahayak Sena) ಮತ್ತು ಪ್ಯಾರಾ ಮಿಲಿಟರಿ ಪಡೆ (Para Military Forces)/ Central Police Organisationಯಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(ಎ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ಬಿ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

**ಅಥವಾ**

(ಸಿ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

(ಡಿ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**ವಿವರಣೆ:** ವ್ಯಕ್ತಿಗಳು ಕೇಂದ್ರ ಸಶಸ್ತ್ರ ಸೇನೆಗಳ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು

ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

**ಗಮನಿಸಿ: BSF, CRPF, CISF** ಪಡೆಗಳಿಂದ ನಿವೃತ್ತರಾದವರನ್ನು 'ಮಾಜಿ ಸೈನಿಕ' ಎಂದು ಪರಿಗಣಿಸಲಾಗುವುದಿಲ್ಲ.

ಇ) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರಸೇನೆಯಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರಸೇನೆಯ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ:** 1) ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತವಾಗಿರುತ್ತದೆ.

**2) ಸೈನ್ಯದಿಂದ ನಿವೃತ್ತಿ ಹೊಂದಿರುವ ಮಾಜಿ ಸೈನಿಕರ ಹೆಂಡತಿ ಅಥವಾ ಮಕ್ಕಳು ಮತ್ತು ಮಲ ಮಕ್ಕಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುವುದಿಲ್ಲ. ಆದರೆ ಕೇಂದ್ರ ಸಶಸ್ತ್ರ ಸೇನೆಯಲ್ಲಿ ಸೇವೆ ಸಲ್ಲಿಸುವಾಗ ಹತರಾದ /ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ಮಾಜಿ ಸೈನಿಕರ ಹೆಂಡತಿ ಅಥವಾ ಮಕ್ಕಳು ಮತ್ತು ಮಲ ಮಕ್ಕಳು ಮಾತ್ರ ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಅಂತಹ ಅಭ್ಯರ್ಥಿಗಳು ಅನುಬಂಧ-4ರಲ್ಲಿ ತಿಳಿಸಲಾಗಿರುವ ಅವಲಂಭಿತ ಪ್ರಮಾಣ ಪತ್ರವನ್ನು ಪಡೆದುಕೊಂಡು, ಸದರಿ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅರ್ಜಿಯೊಂದಿಗೆ ಅಪ್‌ಲೋಡ್ ಮಾಡತಕ್ಕದ್ದು ಹಾಗೂ ಸಮಿತಿಯು ಸೂಚಿಸಿದಾಗ ಸದರಿ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು.**

3] ಸರ್ಕಾರದ ಪತ್ರ ಸಂಖ್ಯೆ: ಒಇ 207 ಪೊಸಿಅ 2018, ದಿನಾಂಕ: 05.02.2019 ರಲ್ಲಿ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವ ಸಂಬಂಧ ಸ್ಪಷ್ಟೀಕರಣ ನೀಡಿದ್ದು, ಅದರಂತೆ ಅರ್ಹ ಮೆರಿಟ್ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕವನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದು ಸೂಕ್ತವಲ್ಲ ಮತ್ತು ಸಮಂಜಸವಾಗಿರುವುದಿಲ್ಲವೆಂದು ಸ್ಪಷ್ಟೀಕರಣ ನೀಡಲಾಗಿರುವುದರಿಂದ ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕವನ್ನು ಪಡೆದಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸದೆ ಆಯಾ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು